C.Misc No.590/2023
P.W.:1

ಈ ದಿನ ದಿಃ16.09.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಾದ ಶ್ರೀ ಡಿ.ಎಲ್ ರವರಿಂದಃ-**

ನಾನು ಈ ಅರ್ಜಿಯಲ್ಲಿ 1ನೇ ಅರ್ಜಿದಾರಳಿದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ನಾನು ನನ್ನ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳನ್ನು ನಾನು ನನ್ನ ವಕೀಲರಿಗೆ ಹೇಳಿ, ಬರೆಯಿಸಿ, ಓದಿಸಿ ತಿಳಿದುಕೊಂಡು ಮನಗೊಂಡ ನಂತರ ಸಹಿ ಮಾಡಿರುತ್ತೇನೆ. ನನ್ನ ಪ್ರಮಾಣಪತ್ರದಲ್ಲಿರುವ ಎಲ್ಲಾ ವಿಷಯಗಳು ನಿಜ ಮತ್ತು ಸತ್ಯಸಂಗತಿಗಳಾಗಿರುತ್ತವೆ.

ಚಾಪಕಾಗದದ ಮೇಲೆ ಎದುರುದಾರರು ದೃಢೀಕರಿಸಿ ಪ್ರಮಾಣೀಕರಿಸಿರುವ ನಮ್ಮ ಕುಟುಂಬದ ವಂಶವೃಕ್ಷವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ಸರ್ವೆ ನಂ.246/2 ಜಮೀನಿಗೆ ಸಂಬಂಧಿಸಿದಂತೆ 2023-2024 ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

C.Misc No.590/2023
P.W.:1

ನನ್ನ ಮಗಳಿಗೆ ಸಂಬಂಧಿಸಿದ ಶಾಲಾ ದೃಢೀಕರಣ ಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

ನನ್ನ ಮಗಳಿಗೆ ಸಂಬಂಧಿಸಿದ ಮುಖ್ಯೋಪಾಧ್ಯಯರು ನೀಡಿದ ಒಂದು ಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ಅರ್ಜಿದಾರರ ಪರ ವಕೀಲರು ಮುಂದುವರೆದ ಮುಖ್ಯವಿಚಾರಣೆಗೆ ಕಾಲಾವಕಾಶ ಕೇಳಿದ್ದು, ಆಲಿಸಿ ಕಾಲಾವಕಾಶ ನೀಡಲಾಯಿತು.

(ಸಾಕ್ಷಿಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

**ಓ ಹೇ ಕೇ ಸರಿ ಇದೆ,**

**(ರಾಧ.ಎಸ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕನಕಪುರ.**